ಎ-72-(152)

## ಕರ್ನಾಟಕ ವಿಧಾನ ಪರಿಷತ್

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅ. ದೇವೇಗೌಡ, ಬೆಂಗಳೂರು ಪದವೀಧರ ಕ್ಷೇತ್ರ ಇವರು ನಿಯಮ 72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಇಲಾಖೆಯ ಉತ್ತರ.

| | |
|---|---|
| ಸೂಚನೆ:- | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿ ಅನೇಕ ವಿಭಾಗಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಅಬ್ದುಲ್ ನಸೀರ್ ಸಾಬ್ ತರಭೇತಿ ಸಂಸ್ಥೆ, ಮಹಾತ್ಮಗಾಂಧಿ ಗ್ರಾಮೀಣ ಇಂಧನ ತರಬೇತಿ ಸಂಸ್ಥೆ, ಕರ್ನಾಟಕ ರಾಜ್ಯ ಗ್ರಾಮೀಣ ಮೂಲಭೂತ ಸೌಕರ್ಯ ನಿಗಮ, ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಜೈವಿಕ ಅನಿಲ ಮಂಡಳಿ, ಗ್ರಾಮ ಪಂಚಾಯತ್ ಇವರುಗಳು ಬರಲಿದ್ದು, ಈ ವಿಭಾಗಗಳಿಗೆ ಪ್ರತ್ಯೇಕ ವೃಂದ ಮತ್ತು ನೇಮಕಾತಿ ನಿಯಮಗಳನು ರಚಿಸಲಾಗಿರುತ್ತದೆ. ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಇನ್ನು ಯಾವುದೇ ವೃಂದ ಮತ್ತು ನೇಮಕಾತಿ ನಿಯಮಗಳು ರಚನೆ ಆಗಿರುವುದಿಲ್ಲ. ಈ ಎಲ್ಲಾ ವಿಭಾಗಗಳಿಗೂ ಸೇರಿ ಒಂದೇ ಏಕರೂಪ ವೃಂದ ಮತ್ತು ನೇಮಕಾತಿ ರಚನೆ ಮಾಡಿದ್ದಲ್ಲಿ,ಸಿಬ್ಬಂದಿ ವರ್ಗದವರ ಹಿತ ಕಾಪಾಡಬಹುದಾಗಿರುತ್ತದೆ. (ಇಲಾಖೆಯಲ್ಲಿ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?) ಎಂಬುದರ ಬಗ್ಗೆ ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯಬಯಸುತ್ತೇನೆ |

**ಉತ್ತರ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಅನೇಕ ವಿಭಾಗಗಳು ಕೆಲಸ ನಿರ್ವಹಿಸುತ್ತಿವೆ. ಪ್ರತಿಯೊಂದು ವಿಭಾಗವು ತನ್ನದೇ ಆದ ಪರಿಣತಿಯನ್ನು ಹೊಂದಿರುವ ಕಾರ್ಯವೈಖರಿಯನ್ನು ಹೊಂದಿರುತ್ತದೆ. ಉದಾಹರಣೆಗೆ:-

(1) **ಅಬ್ದುಲ್ ನಜೀರ್ ಸಾಬ್ ತರಬೇತಿ ಸಂಸ್ಥೆ** - ಸದರಿ ಸಂಸ್ಥೆಯು ಗ್ರಾಮೀಣಾ ಅಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆಯ ವಿವಿಧ ವಿಭಾಗಗಳ ಅಧಿಕಾರಿ / ಸಿಬ್ಬಂದಿಗಳು, ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಸದಸ್ಯರು ಹಾಗೂ ಅಧ್ಯಕ್ಷರು, ಉಪಾಧ್ಯಕ್ಷರುಗಳಿಗೆ ವಿವಿಧ ವಿಷಯಗಳ ಕುರಿತು ತರಬೇತಿಯನ್ನು ಆಯೋಜಿಸುವುದು.

(2) **ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ** - ಗ್ರಾಮೀಣ ಪ್ರದೇಶದ ಜನರಿಗೆ ಸಮರ್ಪಕ ಮತ್ತು ಸುರಕ್ಷಿತ ಕುಡಿಯುವ ನೀರನ್ನು ಒದಗಿಸುವುದು ಮತ್ತು ಗ್ರಾಮೀಣ ಪ್ರದೇಶದಲ್ಲಿ ನೈರ್ಮಲ್ಯವನ್ನು ಕಾಪಾಡುವುದು.

(3) **ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ** - ಗ್ರಾಮೀಣ ಪ್ರದೇಶದ ರಸ್ತೆ, ಸೇತುವೆ, ಕಟ್ಟಡಗಳ ದುರಸ್ಥಿ / ನಿರ್ಮಾಣ ಹಾಗೂ ಇತರೆ ಇಲಾಖೆಗಳ ಕಟ್ಟಡಗಳ ನಿರ್ಮಾಣ / ದುರಸ್ಥಿ / ನಿರ್ವಹಣೆ.

(4) **ಮಹಾತ್ಮಗಾಂಧಿ ಗ್ರಾಮೀಣ ಇಂಧನ ತರಬೇತಿ ಸಂಸ್ಥೆ / ಜೈವಿಕ ಅನಿಲ ಮಂಡಳಿ** - ಸದರಿ ಸಂಸ್ಥೆಯು ಪ್ರಮುಖವಾಗಿ ಜೈವಿಕ ಇಂಧನ ಮೂಲಗಳ ಅಭಿವೃದ್ಧಿ ಹಾಗೂ ನಿರಂತರ ಪೂರೈಕೆಗೆ ಪೂರಕ ಪರಿಸರ ನಿರ್ಮಾಣಕ್ಕೆ ಅನುವಾಗಲು ರಾಜ್ಯ ಜೈವಿಕ ಇಂಧನ ನೀತಿಯ ಸಮರ್ಪಕ ಅನುಷ್ಠಾನದ ಜವಾಬಾರಿಯನ್ನು ಹೊಂದಿರುತದೆ ಹಾಗೂ ತತ್ಸಂಬಂಧದ ವಿವಿಧ ಕಾಮಗಾರಿಗಳ ಅನುಷ್ಠಾನದ ಜವಾಬ್ದಾರಿಯನ್ನು ಹೊಂದಿರುತ್ತದೆ.

(5) **ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ** - ಸದರಿ ಸಂಸ್ಥೆಯು ಕಂಪನಿ ಕಾಯಿದೆಯ ಅನುಸಾರ ನೋಂದಾಯಿತವಾಗಿರುತ್ತದೆ. ಸಂಸ್ಥೆಯು ಸರ್ಕಾರದ ವಿವಿಧ ಯೋಜನೆಗಳ ಕಾಮಗಾರಿಗಳನ್ನು ನೇರವಾಗಿ ನಿರ್ವಹಿಸುತ್ತಿದ್ದು, ಗುತ್ತಿಗೆದಾರರು ಅಥವಾ ಮಧ್ಯವರ್ತಿಗಳ ಪ್ರವೇಶವನ್ನು ತಡೆಗಟ್ಟಿದೆ. ಸದರಿ ಸಂಸ್ಥೆಗೆ ಸರ್ಕಾರದಿಂದ ಯಾವುದೇ ಅನುದಾನವನ್ನು ನೀಡುವುದಿಲ್ಲ.

(6) **ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ** - ಸದರಿ ಯೋಜನೆಯನ್ನು ಕೇಂದ್ರ ಸರ್ಕಾರದ ಕಾಯಿದೆಯ ಅನುಸಾರ 2006-07 ನೇ ಸಾಲಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಮುಖಾಂತರ ಅನುಸಾರಗೊಳಿಸಲಾಗುತ್ತಿದೆ. ಇದೊಂದು ಹಕ್ಕು ಆಧಾರಿತ ಮತ್ತು ಬೇಡಿಕೆ ಆಧರಿತ ಕಾರ್ಯಕ್ರಮವಾಗಿರುತ್ತದೆ ಈ ಯೋಜನೆಯನ್ನು ಕೇಂದ್ರ ಪುರಸ್ಕೃತ ಯೋಜನೆಯನ್ನಾಗಿ ಅನುಷ್ಠಾನ ಮಾಡಲಾಗುತ್ತಿದೆ.

ಮೇಲೆ ತಿಳಿಸಿರುವಂತೆ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಇಲಾಖೆಗಳು ಮತ್ತು ಅಂಗ ಸಂಸ್ಥೆಗಳು ವಿಭಿನ್ನ ಕಾರ್ಯಚಟುವಟಿಕೆಗಳನ್ನು ಹೊಂದಿದ್ದು, ವಿವಿಧ ವಿಷಯಗಳ ಪರಿಣತಿಯ ಅವಶ್ಯಕತೆ ಇರುತ್ತದೆ. ಹಾಗಾಗಿ ಎಲ್ಲಾ ಇಲಾಖೆ/ ಸಂಸ್ಥೆಗಳಿಗೆ ಏಕರೂಪದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸೃಜಿಸಲು ಸಾಧ್ಯವಾಗುವುದಿಲ್ಲ. ಈ ವಿಷಯವು ಇಲಾಖಾ ಹಂತದಲ್ಲಿ ಈಗಾಗಲೇ ವಿವರವಾಗಿ ಪರಿಶೀಲನೆಯಾಗಿರುತ್ತದೆ. ಹಾಗಾಗಿ ಇಲಾಖೆಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಈ ಕೆಳಕಂಡ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆ:-

1. ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2021
2. ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2020
3. ಕರ್ನಾಟಕ ಸಾಮಾನ್ಯ ಸೇವೆಗಳು (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) ನಿಯಮಗಳು -2008, ತಿದ್ದುಪಡಿ ನಿಯಮಗಳು 2011 ಮತ್ತು 2012.
4. ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು -2020.

ಕ್ರಮಾಂಕ 04ರಲ್ಲಿರುವಂತೆ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಹೊಸದಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ.

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು